# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 202 |
| ವಿಧಾನ ಪರಿಷತ್ ಸದಸ್ಯರ ಹೆಸರು | : | ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವವರು | : | **ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಮತ್ತು** ಸಾರ್ವಜನಿಕ ವಲಯ ಉದ್ಯಮಗಳ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 13.09.2022 |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯ ಸರ್ಕಾರದ ವ್ಯಾಪ್ತಿಯಲ್ಲಿರುವ ಸಣ್ಣ ಕೈಗಾರಿಕೆಗಳು/ಉದ್ಯಮಗಳು ಎಷ್ಟು ಅವುಗಳು ಯಾವುವು; (ಮಾಹಿತಿ ನೀಡುವುದು) | ಕರ್ನಾಟಕ ರಾಜ್ಯದಲ್ಲಿ 07/09/2022 ರವರೆಗೆ ನೋಂದಣಿಯಾಗಿರುವ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ಸಂಖ್ಯೆ; 6,19,375 ಜಿಲ್ಲಾವಾರು ವಿವರಗಳನ್ನು **ಅನುಬಂಧ-1**ರಲ್ಲಿ ನೀಡಲಾಗಿದೆ.<br><br>ರಾಜ್ಯ ಸರ್ಕಾರದ ವ್ಯಾಪ್ತಿಯಲ್ಲಿರುವ ಸಣ್ಣ ಕೈಗಾರಿಕೆಗಳ ಸಂಖ್ಯೆ-1 |
| ಆ) | ಆ ಪೈಕಿ ಸಕ್ರಿಯವಾಗಿರುವ ಸಣ್ಣ ಕೈಗಾರಿಕೆಗಳು/ ಉದ್ಯಮಗಳು ಯಾವುವು; ಅವುಗಳ ಕ್ರಿಯಾಶೀಲತೆ ಮತ್ತು ಸ್ಥಿತಿಗತಿಗಳೇನು; | ಉದ್ಯಮಗಳ ನೋಂದಣಿಯನ್ನು ಭಾರತ ಸರ್ಕಾರವು ಉದ್ಯಮ ನೋಂದಣಿ ಅಂತರ್ ಜಾಲ ಪೋರ್ಟಲ್ ನಲ್ಲಿ ನಿರ್ವಹಿಸುತ್ತಿದ್ದು, ಇದರಲ್ಲಿ ಕೇವಲ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ನೋಂದಣಿಗೆ ಮಾತ್ರ ಅವಕಾಶ ಕಲ್ಪಿಸಲಾಗಿದೆ. ಇವುಗಳ ಕ್ರಿಯಾಶೀಲತೆ ಮತ್ತು ಸ್ಥಿತಿಗತಿಯನ್ನು ದಾಖಲು ಮಾಡಲು ಅವಕಾಶವಿರುವುದಿಲ್ಲ.<br><br>ರಾಜ್ಯ ಸರ್ಕಾರದ ವ್ಯಾಪ್ತಿಯಲ್ಲಿರುವ ಸಣ್ಣ ಕೈಗಾರಿಕೆ: ಮೈಸೂರು ಪೇಂಟ್ಸ್ ಅಂಡ್ ವಾರ್ನಿಷ್ ಲಿ. ಮೈಸೂರು ಲಾಭದಾಯಕವಾಗಿ ಕಾರ್ಯನಿರ್ವಹಿಸುತ್ತಿದೆ. |
| ಇ) | ನಷ್ಟದಲ್ಲಿರುವ ಸಣ್ಣ ಕೈಗಾರಿಕೆಗಳು /ಉದ್ಯಮಗಳು ಎಷ್ಟು; ಅವು ಯಾವುವು; (ಮೂರು ವರ್ಷಗಳ ಮಾಹಿತಿ ಒದಗಿಸುವುದು) | ಉದ್ಯಮಗಳ ನೋಂದಣಿಯನ್ನು ಭಾರತ ಸರ್ಕಾರವು ಉದ್ಯಮ ನೋಂದಣಿ ಅಂತರ್ ಜಾಲ ಪೋರ್ಟಲ್ ನಲ್ಲಿ ನಿರ್ವಹಿಸುತ್ತಿದ್ದು, ಇದರಲ್ಲಿ ಕೇವಲ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ನೋಂದಣಿಗೆ ಮಾತ್ರ ಅವಕಾಶ ಕಲ್ಪಿಸಲಾಗಿದೆ. ನಷ್ಟದಲ್ಲಿರುವ ಉದ್ದಿಮೆಗಳ ಮಾಹಿತಿಯನ್ನು ಸದರಿ ಪೋರ್ಟಲ್ ಒಳಗೊಂಡಿರುವುದಿಲ್ಲ. |

| | | |
|---|---|---|
| | | ರಾಜ್ಯ ಸರ್ಕಾರದ ವ್ಯಾಪ್ತಿಯಲ್ಲಿರುವ ಸಣ್ಣ ಕೈಗಾರಿಕೆ: ಮೈಸೂರು ಪೇಂಟ್ಸ್ ಅಂಡ್ ವಾರ್ನಿಷ್ ಲಿ. ಮೈಸೂರು ಲಾಭದಾಯಕವಾಗಿ ಕಾರ್ಯನಿರ್ವಹಿಸುತ್ತಿದೆ. |
| ಈ) | ಸಂಕಷ್ಟದಲ್ಲಿರುವ ಸಣ್ಣ ಕೈಗಾರಿಕೆಗಳು/ ಉದ್ದಿಮೆದಾರರಿಗೆ ರಾಜ್ಯ ಸರ್ಕಾರ ಯಾವ ರೀತಿ ಸಹಾಯ ಮಾಡಲು ಕ್ರಮ ಕೈಗೊಂಡಿದೆ? (ವಿವರಗಳನ್ನು ನೀಡುವುದು) | ಸಂಕಷ್ಟದಲ್ಲಿರುವ ಸಣ್ಣ ಕೈಗಾರಿಕೆಗಳ ಪುನಃಶ್ಚೇತನಕ್ಕೆ ಈ ಕೆಳಗಿನ ಕಾರ್ಯಕ್ರಮಗಳನ್ನು ರೂಪಿಸಲಾಗಿರುತ್ತದೆ.<br><br>**1. ರಿಸರ್ವ್ ಬ್ಯಾಂಕ್ ಆಫ್ ಇಂಡಿಯಾ ನೀತಿ:**<br><br>ಸಾಲ ಪಡೆದು ಒತ್ತಡದಲ್ಲಿರುವ ರೋಗಗ್ರಸ್ಥ ಸಣ್ಣ ಕೈಗಾರಿಕೆಗಳ ಪುನಃಶ್ಚೇತನಕ್ಕಾಗಿ ಆರ್‌ಬಿಐ ರವರು ಸಂಖ್ಯೆ ಆರ್‌ಬಿಐ/2018-19/203 ದಿನಾಂಕ 07/06/2019 ರಂದು ಬ್ಯಾಂಕುಗಳಿಗೆ ಸುತ್ತೋಲೆ ನೀಡಿದ್ದು ಅದರಂತೆ ಬ್ಯಾಂಕುಗಳು ಕಾರ್ಯ ನಿರ್ವಹಿಸುತ್ತಿವೆ.<br><br>ರೋಗಗ್ರಸ್ಥ ಘಟಕಗಳ ಪುನಃಶ್ಚೇತನಕ್ಕಾಗಿ ಬ್ಯಾಂಕುಗಳು ಕೆಳಕಂಡ ಸವಲತ್ತುಗಳನ್ನು ನೀಡುತ್ತಿವೆ:<br><br>1. ಪಡೆದ ಸಾಲದ ಕಂತುಗಳನ್ನು ರೀ ಷೆಡ್ಯೂಲ್ ಮಾಡುವುದು.<br>2.ಅಗತ್ಯಕ್ಕೆ ಬೇಕಾಗಿರುವ ಹೆಚ್ಚುವರಿ ದುಡಿಮೆ ಬಂಡವಾಳ/ಅವಧಿ ಸಾಲ ನೀಡುವುದು.<br><br>ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಯೋಜನೆ ಅಡಿಯಲ್ಲಿ ಇವುಗಳನ್ನು ಪುನಃಶ್ಚೇತನಗೊಳಿಸಲು ಹಮ್ಮಿಕೊಂಡಿರುವ ಯೋಜನೆಗಳು ಈ ಕೆಳಗಿನಂತಿವೆ.<br><br>**ಕೇಂದ್ರ ಸರ್ಕಾರದ ಯೋಜನೆ:**<br><br>ಕೇಂದ್ರ ಸರ್ಕಾರ ಘೋಷಿಸಿರುವ "ಆತ್ಮ ನಿರ್ಭರ ಭಾರತ ಅಭಿಯಾನ" ದ ಅಡಿಯಲ್ಲಿ ಅತೀ ಸಣ್ಣ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳನ್ನು ಪುನಶ್ಚೇತನಗೊಳಿಸಲು ಮತ್ತು ಉದ್ಯಮಗಳಿಗೆ ಆರ್ಥಿಕ ನೆರವು ನೀಡುವ ಯೋಜನೆಯಲ್ಲಿ ಈ ಕೆಳಗಿನ ನೆರವು ದೊರೆತಿದೆ. |

ಭಾರತ ಸರ್ಕಾರವು "ಇ.ಸಿ.ಎಲ್.ಜಿ" -ಎಮರ್ಜೆನ್ಸಿ ಕ್ರೆಡಿಟ್ ಲೈನ್ ಗ್ಯಾರಂಟಿ ಯೋಜನೆಯನ್ನು ಜಾರಿಗೆ ತಂದಿದ್ದು ಇದರನ್ವಯ ಫೆಬ್ರವರಿ 2020 ರಅಂತ್ಯಕ್ಕೆ ಬ್ಯಾಂಕ್‌ಗಳಲ್ಲಿ ಬಾಕಿ ಇರುವ ಎಂ.ಎಸ್.ಎಂ.ಇ ಘಟಕಗಳ ಸಾಲದ ಮೊತ್ತಕ್ಕೆ ಶೇ 20% ರಷ್ಟು ಹೆಚ್ಚುವರಿ ಸಾಲವನ್ನು ಯಾವುದೇ ಹೆಚ್ಚುವರಿ ಖಾತರಿ ಇಲ್ಲದೇ ನೀಡುವ ಯೋಜನೆಯನ್ನು ಜಾರಿಗೆ ತಂದಿರುತ್ತದೆ. ಇದರಡಿಯಲ್ಲಿಇದುವರೆಗೆ ಬ್ಯಾಂಕ್‌ಗಳು ನೀಡಿರುವ ಸಾಲದ ವಿವರಗಳು ಈ ಕೆಳಗಿನಂತಿವೆ:

| | ಒಟ್ಟು ಘಟಕಗಳು | ಒಟ್ಟು ಸಾಲದ ಮೊತ್ತ ರೂ.ಲಕ್ಷಗಳಲ್ಲಿ |
|---|---|---|
| ಸಾಲ ಮಂಜೂರಾತಿ | 1,69,280 | 5,73,805.15 |
| ಸಾಲ ಬಿಡುಗಡೆ | 1,48,662 | 4,90,049.41 |

**ರಾಜ್ಯ ಸರ್ಕಾರದ ಯೋಜನೆ:**

ಕೊರೋನದಿಂದ ಅತಂತ್ರವಾಗಿರುವ ಸಣ್ಣ ಕೈಗಾರಿಕೆಗಳಿಗೆ ರಾಜ್ಯ ಸರ್ಕಾರದಿಂದ ಈ ಕೆಳಗಿನ ಯೋಜನೆ ರೂಪಿಸಲಾಗಿರುತ್ತದೆ.

1. ಇಂಧನ ಇಲಾಖೆಯು ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ಏಪ್ರಿಲ್ ಮತ್ತು ಮೇ 2020 ತಿಂಗಳ ಬೇಡಿಕೆ ಶುಲ್ಕ ಮತ್ತು ಸ್ಥಿರ ಶುಲ್ಕವನ್ನು ಮನ್ನಾ ಮಾಡಿರುತ್ತದೆ.

2. ಇಂಧನ ಇಲಾಖೆಯು ವಿದ್ಯುತ್ ಬಿಲ್‌ನ್ನು ಪ್ರಾಮಾಣಿಕವಾಗಿ ನಿಗದಿತ ಅವಧಿಯೊಳಗೆ ಪಾವತಿಸುವ ಕೈಗಾರಿಕೆಗಳಿಗೆ ರಿಯಾಯಿತಿಯನ್ನು ನೀಡಿರುತ್ತದೆ. ಹೆಚ್‌ಟಿ ಗರಿಷ್ಠ ಮಿತಿ ರೂ.1 ಲಕ್ಷ, ಎಲ್‌ಟಿ ಗರಿಷ್ಠ ಮಿತಿ ರೂ.10,000/-

| | |
|---|---|
| 1 ರಿಂದ 5 ದಿನದೊಳಗೆ ಪಾವತಿಸಿದಲ್ಲಿ | ಶೇ 1% ರಿಯಾಯಿತಿ |
| 6 ರಿಂದ 15 ದಿನದೊಳಗೆ ಪಾವತಿಸಿದಲ್ಲಿ | ಶೇ 0.5% ರಿಯಾಯಿತಿ |
| 15 ರಿಂದ 30 ದಿನದೊಳಗೆ ಪಾವತಿಸಿದಲ್ಲಿ | ಯಾವುದೇ ರಿಯಾಯಿತಿ ಇರುವುದಿಲ್ಲ |

3. ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯು ಉದ್ಯಮಶೀಲರು ತಮಗೆ ಹಂಚಿಕೆಯಾದ ನಿವೇಶನಗಳ ಕಂತು ಮಾರ್ಚ್, ಏಪ್ರಿಲ್ ಮತ್ತು ಮೇ 2020 ತಿಂಗಳಲ್ಲಿ ಪಾವತಿಸದಿದ್ದಲ್ಲಿ ಆ ಪಾವತಿಯನ್ನು ಕ್ರಮವಾಗಿ 3 ತಿಂಗಳು ಮುಂದೂಡಲಾಗಿದೆ ಮತ್ತು ಈ ಮೊತ್ತಕ್ಕೆ ಯಾವುದೇ ಬಡ್ಡಿಯನ್ನು ವಿಧಿಸುವುದಿಲ್ಲ.

4. ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮವು ಉದ್ಯಮಶೀಲರು ತಮಗೆ ಹಂಚಿಕೆಯಾದ ನಿವೇಶನಗಳ ಕಂತು, ಮಳಿಗೆಗಳ ಬಾಡಿಗೆ ಮತ್ತು ನೀರಿನ ಶುಲ್ಕಗಳ ಏಪ್ರಿಲ್ ಮತ್ತು ಮೇ 2020 ತಿಂಗಳುಗಳ ಕಂತನ್ನು ಈ ಕೆಳಗಿನಂತೆ ಪಾವತಿಸಲು ಅವಕಾಶ ಕಲ್ಪಿಸಲಾಗಿದೆ. ಇದಕ್ಕೆ ಯಾವುದೇ ಬಡ್ಡಿಯನ್ನು ವಿಧಿಸಲಾಗುವುದಿಲ್ಲ.

| | |
|---|---|
| ಏಪ್ರಿಲ್ 2020 ತಿಂಗಳ ಕಂತು | ಜೂನ್ 2020 ತಿಂಗಳ ಕಂತಿನಜೊತೆ ಪಾವತಿಸತಕ್ಕದ್ದು |
| ಮೇ 2020 ತಿಂಗಳ ಕಂತು | ಜುಲೈ 2020 ತಿಂಗಳ ಕಂತಿನ ಜೊತೆ ಪಾವತಿಸತಕ್ಕದ್ದು |
| ಜೂನ್ 2020 ತಿಂಗಳ ಕಂತು | ಆಗಸ್ಟ್ 2020 ತಿಂಗಳ ಕಂತಿನ ಜೊತೆ ಪಾವತಿಸತಕ್ಕದ್ದು |

ಕೊರೋನಾ 2ನೇ ಅಲೆಯ ನಂತರ ರಾಜ್ಯ ಸರ್ಕಾರದ ಇಂಧನ ಇಲಾಖೆಯು ದಿನಾಂಕ 21.06.2021 ರ ಆದೇಶದಂತೆ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳು ಪಾವತಿಸಬೇಕಾದ ಮೇ ಮತ್ತು ಜೂನ್ 2021 ತಿಂಗಳ ಬೇಡಿಕೆ/ ನಿಗದಿತ ಶುಲ್ಕವನ್ನು ಮನ್ನಾ ಮಾಡಿರುತ್ತದೆ.

ಸಿಐ 141 ಎಸ್‌ಎಸ್ ಐ 2022

(ಎನ್.ನಾಗರಾಜು (ಎಂ.ಟಿ.ಬಿ))
ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ
ಸಾರ್ವಜನಿಕ ವಲಯ ಉದ್ಯಮಗಳ ಸಚಿವರು